# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 339 |
| ಉತ್ತರಿಸಬೇಕಾದ ದಿನಾಂಕ | : | 23.09.2020 |
| ಉತ್ತರಿಸಬೇಕಾದ ಸಚಿವರು | : | ವಸತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ವಿವಿಧ ವಸತಿ ಯೋಜನೆಗಳು ಅರ್ಧಕ್ಕೆ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ರಾಜ್ಯದಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ಅಂದರೆ 2019-20 ನೇ ಸಾಲಿನಿಂದ ಯಾವುದೇ ವಸತಿ ಯೋಜನೆಗಳು ಅರ್ಧಕ್ಕೆ ನಿಂತು ಹೋಗಿರುವುದಿಲ್ಲ, ಹಾಗೂ ಇಂತಹ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| (ಆ) | ಬಂದಿದ್ದಲ್ಲಿ, ಈ ಯೋಜನೆಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ಹಮ್ಮಿಕೊಂಡಿರುವ ಕಾರ್ಯ ಕ್ರಮಗಳೇನು ? | ರಾಜ್ಯ ಸರ್ಕಾರವು ಅನುಷ್ಠಾನಗೊಳಿಸುತ್ತಿರುವ ವಿವಿಧ ವಸತಿ ಯೋಜನೆಗಳಡಿ ಸರ್ಕಾರದ ಸಹಾಯಧನ ಪಡೆದು ಫಲಾನುಭವಿಗಳೇ ಸ್ವತ: ಮನೆಗಳನ್ನು ನಿರ್ಮಿಸಿಕೊಳ್ಳುತ್ತಿರುವುದರಿಂದ ಮನೆಗಳ ನಿರ್ಮಾಣದಲ್ಲಿ ವಿಳಂಭವಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ.<br><br>ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದ ಅಂದರೆ 2019-20 ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಆವಾಸ್ (ಗ್ರಾಮೀಣ) ಮತ್ತು ದೇವರಾಜು ಅರಸು ಯೋಜನೆಗಳಡಿ ಒಟ್ಟು 39,759 ಮನೆಗಳನ್ನು ಮಂಜೂರು ಮಾಡಲಾಗಿದೆ. ಆ ಪೈಕಿ 395 ಮನೆಗಳು ಪೂರ್ಣಗೊಂಡಿದ್ದು, 12,317 ಮನೆಗಳು ಪ್ರಗತಿಯಲ್ಲಿದ್ದು, 26,689 ಮನೆಗಳು ಪ್ರಾರಂಭವಾಗಬೇಕಾಗಿರುತ್ತದೆ. ನಿಗದಿತ ಅವಧಿಯಲ್ಲಿ ಪ್ರಾರಂಭ ಮಾಡಿಕೊಳ್ಳದ 358 ಮನೆಗಳನ್ನು ರದ್ದುಪಡಿಸಲಾಗಿದೆ.<br><br>ಕೇಂದ್ರ ಪುರಸ್ಕೃತ ಯೋಜನೆಯಾದ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) 2020-21 ನೇ ಸಾಲಿನಲ್ಲಿ ರಾಜ್ಯಕ್ಕೆ ಒಟ್ಟು 1,51,715 ಮನೆಗಳ ಗುರಿಯನ್ನು ನೀಡಲಾಗಿದೆ.<br><br>ಪ್ರಧಾನ ಮಂತ್ರಿ ಆವಾಸ್ (ನಗರ) ಯೋಜನೆಯಡಿ 2019-20 ರಿಂದ ಇಲ್ಲಿಯವರೆಗೆ ಒಟ್ಟು 879 ಗುಂಪು ಮನೆಗಳ (AHP) ನಿರ್ಮಾಣಕ್ಕೆ ಕೇಂದ್ರ ಸರ್ಕಾರದಿಂದ ಅನುಮೋದನೆ ನೀಡಲಾಗಿದೆ.<br><br>ಕಳೆದ ಒಂದು ವರ್ಷದಲ್ಲಿ ಒಟ್ಟು 17,966 ಗುಂಪು ಮನೆಗಳು ಪೂರ್ಣಗೊಂಡಿರುತ್ತವೆ(ಹಿಂದಿನ ಶ್ರೇಣಿಗಳಲ್ಲಿ ಕಾಮಗಾರಿ ಚಾಲ್ತಿಯಲ್ಲಿದ್ದ ಮನೆಗಳೂ ಸೇರಿದಂತೆ).<br><br>ಗುಂಪು ಮನೆಗಳ ನಿರ್ಮಾಣಕ್ಕೆ ಈಗಾಗಲೇ ಅನುಮೋದನೆಗೊಂಡು ಪ್ರಗತಿಯಲ್ಲಿರುವ 39,438 ಮನೆಗಳನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗುತ್ತಿದೆ. |

| | | |
|---|---|---|
| | | ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ BLC ಹಾಗೂ AHP ಯೋಜನೆಗಳಡಿ ಅನುಮೋದನೆಗೊಂಡಿರುವ ಹಾಗೂ ಪ್ರಗತಿಯಲ್ಲಿರುವ ಮನೆಗಳನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ |

ವಇ 273 ಹೆಚ್‌ಎಂ 2020

(ವಿ.ಸೋಮಣ್ಣ)
ವಸತಿ ಸಚಿವರು